**Akashvani : Bangalore**
**National Bulletin In Kannada**
**10.02.2025 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.02.2025 / 13.10 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಬೆಂಗಳೂರಿನಲ್ಲಿ ಏರೋ ಇಂಡಿಯಾ -೨೦೨೫ರ ಪ್ರದರ್ಶನಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ

೨. ೮ನೇ ಆವೃತ್ತಿಯ ಪರೀಕ್ಷಾ ಪೇ ಚರ್ಚಾ ; ವಿದ್ಯಾರ್ಥಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ

೩. ಮಹಾಕುಂಭಮೇಳ ; ಪ್ರಯಾಗ್‌ರಾಜ್‌ನ ತ್ರಿವೇಣಿ ಸಂಗಮದಲ್ಲಿ ರಾಷ್ಟ್ರಪತಿ ದ್ರೌಪದಿ ಮರ್ಮು ಪವಿತ್ರ ಸ್ನಾನ

೪. ಅನುತ್ಪಾದಕ ಆಸ್ತಿಗಳ ಸಂದರ್ಭದಲ್ಲಿ ಚಿನ್ನದ ಸಾಲಗಳ ಹರಾಜಿಗೆ ಕಠಿಣ ಪ್ರಕ್ರಿಯೆ ; ಕೇಂದ್ರ ಸರ್ಕಾರ

**<><*<><>*><>**

ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ಇಂದು ಕೇಂದ್ರ ರಕ್ಷಣಾ ಖಾತೆ ಸಚಿವ ರಾಜನಾಥ್ ಸಿಂಗ್, ವೈಮಾನಿಕ ಪ್ರದರ್ಶನಕ್ಕೆ ಚಾಲನೆ ನೀಡಿದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉಪಸ್ಥಿತರಿದ್ದರು. ಏರ್ ಶೋನಲ್ಲಿ ಸೂರ್ಯ ಕಿರಣ್, ಸುಖೋಯ್ ಯುದ್ಧ ವಿಮಾನಗಳು, ಶತ್ರುಗಳ ವಿರುದ್ಧ ರಹಸ್ಯ ಕಾರ್ಯಾಚರಣೆ ನಡೆಸಬಲ್ಲ ೫ನೇ ತಲೆಮಾರಿನ ಅತ್ಯಾಧುನಿಕ ಯುದ್ಧ ವಿಮಾನಗಳಾದ ರಷ್ಯಾದ 'ಎಸ್‌ಯು-೫೭', ಅಮೆರಿಕದ 'ಎಫ್-೩೫' ಜನಮನ ಸೆಳೆಯಿತು.

ಈ ಕುರಿತು ಒಂದು ವರದಿ

ಏರ್ ಶೋನಲ್ಲಿ ವಿವಿಧ ದೇಶಗಳು ಭಾಗವಹಿಸಿದ್ದು, ಮಾನವ ರಹಿತ ವೈಮಾನಿಕ ವ್ಯವಸ್ಥೆಗಳು, ಯುದ್ಧವಿಮಾನಗಳು, ಸುಧಾರಿತ ವೈಮಾನಿಕ ಹಾರಾಟ ಹಾಗೂ ರಕ್ಷಣಾ ತಂತ್ರಜ್ಞಾನದ ಪ್ರದರ್ಶನ

ನಡೆಸಲಾಗಿದೆ. ವಿವಿಧ ದೇಶಗಳ ಸಚಿವರ ನಿಯೋಗಗಳು, ವಾಯುಪಡೆಯ ಹಿರಿಯ ಅಧಿಕಾರಿಗಳು, ಉದ್ಯಮದ ಮುಖಂಡರು ಏರ್‌ಶೋನಲ್ಲಿ ಭಾಗವಹಿಸಿದ್ದಾರೆ.  ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ.

<><*<><>*><>

ನವದೆಹಲಿಯಲ್ಲಿ ನಡೆದ ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮದ ೮ನೇ ಆವೃತ್ತಿಯಲ್ಲಿ ವಿದ್ಯಾರ್ಥಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಸಂವಾದ ನಡೆಸಿದರು. ಈ ವೇಳೆ ರಾಗಿ ಮತ್ತು ತರಕಾರಿಗಳ ಮಹತ್ವದ ಬಗ್ಗೆ ಅವರು ಒತ್ತಿ ಹೇಳಿದ್ದಾರೆ. ಪರೀಕ್ಷೆ ಸಮಯದಲ್ಲಿ ಒತ್ತಡ ಮತ್ತು ಆತಂಕವನ್ನು ನಿವಾರಿಸುವುದು ಹೇಗೆ ಎಂಬುದರ ಕುರಿತು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಅನಾರೋಗ್ಯದ ಅನುಪಸ್ಥಿತಿಯು ಆರೋಗ್ಯವಾಗಿರುವುದಕ್ಕೆ ಸಮಾನವಲ್ಲ. ನಿದ್ರೆಯು ಪೌಷ್ಠಿಕಾಂಶದ ಮೇಲೆ ಅವಲಂಬಿತವಾಗಿದೆ. ವೈದ್ಯಕೀಯ ವಿಜ್ಞಾನವು ನಿದ್ರೆಯ ಮಹತ್ವವನ್ನು ಗುರುತಿಸುತ್ತದೆ. ಬೆಳಗಿನ ಬಿಸಿಲಿನಲ್ಲಿ ವಿದ್ಯಾರ್ಥಿಗಳು ಸಮಯವನ್ನು ಕಳೆಯಬೇಕು ಎಂದು ಪ್ರಧಾನಿ ಸಲಹೆ ನೀಡಿದರು. ಒತ್ತಡವನ್ನು ನಿಯಂತ್ರಿಸುವ ಬಗ್ಗೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದ ಅವರು, ಕಡಿಮೆ ಅಂಕಗಳು ಮನೆಯಲ್ಲಿ ಉದ್ವಿಗ್ನ ವಾತಾವರಣವನ್ನು ಸೃಷ್ಟಿಸುತ್ತವೆ. ಒತ್ತಡಕ್ಕೆ ಒಳಗಾಗದೇ ತಮಗೆ ತಾವೇ ಸವಾಲು ಹಾಕಿಕೊಳ್ಳುವಂತೆ ಹೇಳಿದರು.  ಪರೀಕ್ಷೆ ಸಮಯದಲ್ಲಿ ಉಂಟಾಗುವ ಒತ್ತಡ ಮತ್ತು ಅನುಮಾನವನ್ನು ಲೆಕ್ಕಿಸದೇ ವಿದ್ಯಾರ್ಥಿಗಳು ಸಕಾರಾತ್ಮಕವಾಗಿ ಇರಬೇಕು ಎಂದರು.

ಪ್ರಧಾನಿ ನರೇಂದ್ರ ಮೋದಿ ( ೨೪ ಸೆಕೆಂಡ್‌ಗಳು)

ಪರೀಕ್ಷೆಯ ಸಮಯದಲ್ಲಿ ಸಮಯ ನಿರ್ವಹಣೆ ಕುರಿತು ವಿದ್ಯಾರ್ಥಿನಿಯೊಬ್ಬರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಪ್ರಧಾನಿ, ಸಮಯವನ್ನು ಅರ್ಥ ಮಾಡಿಕೊಳ್ಳುವುದು ಬಹಳ ಮುಖ್ಯ. ಚಟವಟಿಕೆಗಳ ಮೇಲೆ ಗಮನ ಹರಿಸಲು ವೇಳಾಪಟ್ಟಿಯನ್ನು ಸಿದ್ಧಪಡಿಸಿಕೊಳ್ಳುವಂತೆ ಅವರು ಸಲಹೆ ನೀಡಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಉನ್ನತ ರಾಜತಾಂತ್ರಿಕ ಪ್ರವಾಸದ ಹಿನ್ನೆಲೆಯಲ್ಲಿ  ಫ್ರಾನ್ಸ್ ಹಾಗೂ ಅಮೆರಿಕಕ್ಕೆ ಭೇಟಿ ನೀಡಲಿದ್ದಾರೆ. ಈ ಪ್ರವಾಸದ ಮೊದಲ ಚರಣದಲ್ಲಿ ಇಂದಿನಿಂದ ಇದೇ

೧೨ರವರೆಗೆ ಫ್ರಾನ್ಸ್‌ನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಇಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಕ್ರಿಯಾ ಶೃಂಗಸಭೆ - ೨೦೨೫ರ ಅಧ್ಯಕ್ಷತೆ ವಹಿಸಲಿದ್ದಾರೆ. ನೈತಿಕ ಜವಾಬ್ದಾರಿಯೊಂದಿಗೆ ಆವಿಷ್ಕಾರಗಳ ಹೊಂದಾಣಿಕೆ ಮಾಡುವ ಜಾಗತಿಕ ಕೃತಕ ಬುದ್ಧಿಮತ್ತೆ ನೀತಿಗಳನ್ನು ರೂಪಿಸುವುದು ಈ ಶೃಂಗಸಭೆಯ ಉದ್ದೇಶವಾಗಿದೆ. ೧೦೦ಕ್ಕೂ ಹೆಚ್ಚು ದೇಶಗಳ ಸಂಶೋಧಕರು, ವ್ಯಾಪಾರ ಧುರೀಣರು, ಸಮಾಜದ ಪ್ರತಿನಿಧಿಗಳು ೨ ದಿನಗಳ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಆಡಳಿತದ ಮೇಲೆ ಕೃತಕ ಬುದ್ಧಿಮತ್ತೆ ಪರಿಣಾಮ, ಆರ್ಥಿಕತೆ, ಮೂಲಭೂತಹಕ್ಕು, ಮೊದಲಾದವುಗಳ ಬಗ್ಗೆ ಚರ್ಚೆ ವಿಚಾರ ವಿನಿಮಯ ನಡೆಸಲಿದ್ದಾರೆ. ಈ ಕುರಿತು ಫ್ರಾನ್ಸ್‌ನಲ್ಲಿರುವ ಭಾರತದ ರಾಯಭಾರಿ ಸಂಜೀವ್ ಕುಮಾರ್ ಸಿಂಗ್ಲಾ ಮಾತನಾಡಿ, ಕೃತಕ ಬುದ್ಧಿಮತ್ತೆ ಕೆಲವೇ ಜನರ ಅಥವಾ ಕೆಲವೇ ಕಂಪನಿಗಳ ಸ್ವಾಮ್ಯವಾಗಬಾರದು ಎನ್ನುವುದು ಭಾರತದ ಪ್ರಾಥಮಿಕ ಕಾಳಜಿಯಾಗಿದೆ ಎಂದು ಹೇಳಿದ್ದಾರೆ. ನರೇಂದ್ರ ಮೋದಿಯವರು, ಮಾರ್ಸೇಲ್ಲಿಯಲ್ಲಿ ಭಾರತದ ಹೊಸ ದೂತವಾಸ ಕಚೇರಿಯನ್ನು ಉದ್ಘಾಟಿಸಲಿದ್ದಾರೆ. ಫ್ರಾನ್ಸ್ ಹಾಗೂ ಭಾರತದ ನಡುವಿನ ದ್ವಿಪಕ್ಷೀಯ ಸಂಬಂಧಗಳ ಬಗ್ಗೆಯೂ ಅಲ್ಲಿನ ವಿವಿಧ ಗಣ್ಯರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಫ್ರಾನ್ಸ್ ಭೇಟಿ ನಂತರ ಪ್ರಧಾನಿ ನರೇಂದ್ರ ಮೋದಿ, ಬುಧವಾರದಂದು ಎರಡು ದಿನಗಳ ಭೇಟಿಗಾಗಿ ಅಮೆರಿಕಕ್ಕೆ ತೆರಳಲಿದ್ದಾರೆ. ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಪ್ರಧಾನಿ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ವ್ಯಾಪಾರ, ಕಾರ್ಯತಂತ್ರ ಸಹಕಾರ ಹಾಗೂ ತಂತ್ರಜ್ಞಾನ ಸಹಭಾಗಿತ್ವದ ಬಗ್ಗೆ ವಿಚಾರ ವಿನಿಮಯ ನಡೆಸಲಿದ್ದಾರೆ.

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ಉತ್ತರ ಪ್ರದೇಶದ ಪ್ರಯಾಗ್‌ರಾಜ್ ಮಹಾಕುಂಭಕ್ಕೆ ಭೇಟಿ ನೀಡಿ, ಗಂಗಾ, ಯಮುನಾ, ಸರಸ್ವತಿ ನದಿಗಳ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು. ಬಳಿಕ ಅವರು, ಪ್ರಯಾಗ್‌ರಾಜ್‌ನಲ್ಲಿನ ಅಕ್ಷಯ್‌ವತ್ ಮತ್ತು ಬಡೇ ಹನುಮಾನ್ ಮಂದಿರಗಳಿಗೂ ಭೇಟಿ ನೀಡಿದರು. ನಂತರ ಡಿಜಿಟಲ್ ಮಹಾಕುಂಭ ಎಕ್ಸ್ಪಿರಿಯನ್ಸ್ ಕೇಂದ್ರಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಉತ್ತರಪ್ರದೇಶ ರಾಜ್ಯಪಾಲರಾದ ಆನಂದಿಬೆನ್ ಪಟೇಲ್ ಉಪಸ್ಥಿತರಿದ್ದರು. ಇದುವರೆಗೂ ತ್ರಿವೇಣಿ ಸಂಗಮದಲ್ಲಿ ೪೩ ಕೋಟಿಗೂ ಅಧಿಕ ಯಾತ್ರಾರ್ಥಿಗಳು ಪವಿತ್ರ ಸ್ನಾನ ಕೈಗೊಂಡಿದ್ದಾರೆ.

<><*<><>*><>

ಮಹಾಕುಂಭಮೇಳ ನಿಮಿತ್ತ ಮಾಘಮಾಸದ ಪೂರ್ಣಿಮೆಯ ಪವಿತ್ರ ಸ್ನಾನದ ಹಿನ್ನೆಲೆಯಲ್ಲಿ ಉತ್ತರಪ್ರದೇಶದ ಪ್ರಯಾಗ್‌ರಾಜ್‌ನ ೮ ರೈಲು ನಿಲ್ದಾಣಗಳಲ್ಲಿ ಸರ್ಕಾರವು ವಿಸ್ತೃತ ವ್ಯವಸ್ಥೆಗಳನ್ನು ಮಾಡಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈಲು ನಿಲ್ದಾಣಗಳಲ್ಲಿ ಭಕ್ತರಿಗೆ ಸಾಧ್ಯವಾದಷ್ಟು ಉತ್ತಮ ವ್ಯವಸ್ಥೆಗಳನ್ನು ಕಲ್ಪಿಸಿಕೊಡಲು ಉತ್ತರಪ್ರದೇಶದ ಸರ್ಕಾರದೊಂದಿಗೆ ಕೇಂದ್ರ ಸರ್ಕಾರ ನಿಕಟವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಇದೇ ತಿಂಗಳ ೧೪ರವರೆಗೆ ಪ್ರಯಾಣಿಕರ ಸಂಚಾರಕ್ಕೆ ಪ್ರಯಾಗ್‌ರಾಜ್ ಸಂಗಮ ನಿಲ್ದಾಣವನ್ನು ಮುಚ್ಚಲಾಗುವುದು ಎಂದು ತಿಳಿಸಿದ ಅವರು, ಮಹಾಕುಂಭಮೇಳ ಪ್ರದೇಶದ ಸುತ್ತಮುತ್ತಲಿನ ಇತರೆ ೮ ನಿಲ್ದಾಣಗಳಿಂದ ನಿಯಮಿತ ಮತ್ತು ವಿಶೇಷ ರೈಲುಗಳು ಸರಾಗವಾಗಿ ಚಲಿಸುತ್ತಿವೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

**<><*<><>*><>**

ಅನುತ್ಪಾದಕ ಆಸ್ತಿಗಳ ಸಂದರ್ಭದಲ್ಲಿ ಚಿನ್ನದ ಸಾಲಗಳ ಹರಾಜಿಗೆ ಕಠಿಣ ಪ್ರಕ್ರಿಯೆಗಳನ್ನು ರೂಪಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪತ್ರಗಳಿಗೆ ಉತ್ತರಿಸಿದ ಹಣಕಾಸು ಸಚಿವೆ ನಿರ್ಮಲಾ ಸೀತಾರಾin್, ಬ್ಯಾಂಕೇತರ ಹಣಕಾಸು ಕಂಪನಿಗಳು ಮತ್ತು ನಿಗದಿತ ವಾಣಿಜ್ಯ ಬ್ಯಾಂಕುಗಳು, ಚಿನ್ನದ ಸಾಲಗಳ ಮರುಪಾವತಿಯನ್ನು ಪರಿಗಣಿಸುವವರೆಗೆ ಇದೇ ರೀತಿಯ ನಿಯಮಗಳನ್ನು ಅನುಸರಿಸಬೇಕಾಗಿದೆ ಎಂದು ಹೇಳಿದರು. ಬ್ಯಾಂಕ್ ಖಾತೆದಾರರು, ಸಾಲ ಮರುಪಾವತಿಸಲು ಸಾಧ್ಯವಾಗದಿದ್ದರೆ, ಸಾಲ ನೀಡುವ ಸಂಸ್ಥೆ, ಚಿನ್ನದ ಹರಾಜು ಮಾಡಬೇಕಾಗುತ್ತದೆ ಎಂದು ಮುಂಚಿತವಾಗಿ ತಿಳಿಸಿ, ಅವರಿಗೆ ಹಲವಾರು ನೋಟಿಸ್‌ಗಳನ್ನು ನೀಡುತ್ತದೆ ಎಂದು ಅವರು ಹೇಳಿದರು. ಹರಾಜಿನ ಸಂದರ್ಭದಲ್ಲಿಯೂ, ಖಾತೆದಾರರಿಗಾಗಿ ಹಲವು ಮಾರ್ಗಸೂಚಿಗಳಿವೆ. ಖಾತೆದಾರರ ಉಪಸ್ಥಿತಿಯಿಲ್ಲದೆ ಅಥವಾ ಅವರ ಜಿಲ್ಲೆಯ ಹೊರಗೆ ಹರಾಜು ಮಾಡಲು ಸಾಧ್ಯವಿಲ್ಲ ಎಂದು ಸಚಿವರು ತಿಳಿಸಿದರು.

ಮೌಲ್ಯಮಾಪನ ಮಾಡದ ಹೊರತು, ಹರಾಜು ಮಾಡಲು ಸಾಧ್ಯವಿಲ್ಲ ಅಲ್ಲದೇ, ಓಃಈಂ ಮಾನದಂಡಗಳನ್ನು ಅನುಸರಿಸಬೇಕಾಗಿದೆ ಎಂದು ಅವರು ಸದನಕ್ಕೆ ಮಾಹಿತಿ ನೀಡಿದರು.

**<><*<><>*><>**

ದೇಶದಲ್ಲಿ ಆಹಾರ ಭದ್ರತಾ ಕಾಯ್ದೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ ರಾಜ್ಯಸಭೆಯಲ್ಲಿಂದು ಗಮನ ಸೆಳೆದರು.

ಶೂನ್ಯ ವೇಳೆಯಲ್ಲಿ ವಿಷಯವನ್ನು ಪ್ರಸ್ತಾಪಿಸಿದ ಅವರು, ರಾಷ್ಟ್ರವ್ಯಾಪಿ ಜನಗಣತಿ ವಿಳಂಬವಾಗುತ್ತಿರುವುದರಿಂದ, ಸುಮಾರು ೧೪ ಕೋಟಿ ಅರ್ಹ ಜನರು ಆಹಾರ ಭದ್ರತಾ ಸೌಲಭ್ಯಗಳನ್ನು ಪಡೆಯುವಲ್ಲಿ ವಂಚಿತರಾಗುತ್ತಿದ್ದಾರೆ ಎಂದು ಪ್ರತಿಪಾದಿಸಿದರು. ಸಾಧ್ಯವಾದಷ್ಟು ಶೀಘ್ರ ಹೊಸ ಜನಗಣತಿಯನ್ನು ನಡೆಸಬೇಕೆಂದು ಒತ್ತಾಯಿಸಿದ ಅವರು, ಆಹಾರ ಭದ್ರತಾ ಕಾಯ್ದೆ - ೨೦೧೩, ಸುಮಾರು ಶೇಕಡಾ ೭೫ರಷ್ಟು ಗ್ರಾಮೀಣ ಜನರಿಗೆ ಮತ್ತು ಶೇಕಡಾ ೫೦ರಷ್ಟು ನಗರ ಜನಸಂಖ್ಯೆಗೆ ಪ್ರಯೋಜನ ನೀಡುವ ಗುರಿ ಹೊಂದಿದೆ ಎಂದರು. ಆಹಾರ ಭದ್ರತೆ ಒಂದು ಸವಲತ್ತು ಅಲ್ಲ, ಅದು ಜನರ ಮೂಲಭೂತ ಹಕ್ಕು ಎಂದು ಸೋನಿಯಾ ಗಾಂಧಿ ಪ್ರತಿಪಾದಿಸಿದರು.

<><*<><>*><>

ಪ್ರಸಕ್ತ ಹಣಕಾಸು ವರ್ಷದಲ್ಲಿ ಭಾರತವು ಮೊದಲ ಬಾರಿಗೆ ೧ ಲಕ್ಷ ಕೋಟಿ ರೂಪಾಯಿ ಮೌಲ್ಯದ ಐ-ಫೋನ್‌ಗಳನ್ನು ರಫ್ತು ಮಾಡಿದೆ. ಈ ಕುರಿತು ಲೇಖನವೊಂದನ್ನು ಹಂಚಿಕೊಂಡ ಕೇಂದ್ರ ಎಲೆಕ್ಟ್ರಾನಿಕ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಈ ಗುರಿಯನ್ನು ಸಾಧಿಸಲು ಉತ್ಪಾದನೆಗೆ ಸಂಬಂಧಿಸಿದ ಕೇಂದ್ರ ಸರ್ಕಾರದ ಪ್ರೋತ್ಸಾಹಕ ಯೋಜನೆಯೇ ಕಾರಣ. ಮುಂದಿನ ಹಣಕಾಸು ವರ್ಷದಲ್ಲಿ ಒಟ್ಟಾರೆ ಸ್ಮಾರ್ಟ್ ಫೋನ್ ರಫ್ತು ೨.೨೫ ಲಕ್ಷ ಕೋಟಿ ರೂಪಾಯಿಗಳನ್ನು ದಾಟುವ ನಿರೀಕ್ಷೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>